ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಶಾಲೆಯಿಂದ ಹೊರಗುಳಿದ ಬಾಲ ಕಾರ್ಮಿಕ ಮಕ್ಕಳ ಶಾಲೆಯ ಕಡೆ ನನ್ನ ನಡೆ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

227 (399) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಶಾಲೆಯಿಂದ ಹೊರಗುಳಿದ ಎಲ್ಲಾ ಮಕ್ಕಳನ್ನು (ವಿಶೇಷವಾಗಿ ಬಾಲ ಕಾರ್ಮಿಕ ಮಕ್ಕಳು) ಪುನಃ ಮುಖ್ಯ ಶಾಲಾವಾಹಿನಿಗೆ ಕರೆತರಲು "ಶಾಲೆಯ ಕಡೆ ನನ್ನ ನಡೆ" ಎಂಬ ವಿಶೇಷ ಅಭಿಯಾನವನ್ನು ಪ್ರಾರಂಭಿಸಿದ್ದು, ಇದಕ್ಕೆ ಇಲಾಖೆಯಿಂದ ನಿರೀಕ್ಷಿತ ಬೆಂಬಲ ದೊರೆಯದೆ ವಿಫಲಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಈ ವಿಶೇಷ ಅಭಿಯಾನದ ಮೂಲಕ ಇಲ್ಲಿಯವರೆಗೆ ಎಷ್ಟು ಜನ ಬಾಲ ಕಾರ್ಮಿಕರನ್ನು ಮರಳಿ ಶಾಲಾ ಮುಖ್ಯವಾಹಿನಿಗೆ ಕರೆತರಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)